# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸಮಾಜ ಕಲ್ಯಾಣ ಸಚಿವಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘಗಳ ಮೆಟ್ರಿಕ್-ಪೂರ್ವ/ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳ ಮತ್ತು ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಭೋಜನಾ ವೆಚ್ಚ ಹೆಚ್ಚಿಸುವಿಕೆ.

ಉಲ್ಲೇಖ: (1)ಆದೇಶ ಸಂಖ್ಯೆ:ಸಕಇ 175 ಬಿಎಂಎಸ್ 2005, ದಿನಾಂಕ:07-11-2005.

(2)ಪತ್ರ ಸಂಖ್ಯೆ: ಸಕನಿ: ಇಡಿ 4:ಸಿಆರ್ 19:2008-09 ದಿನಾಂಕ:30-07-2008.

(3)ಪತ್ರ ಸಂಖ್ಯೆ:ಹಿಂವಕನಿ:ವಿನಿಶಾ-2:ಸಿಆರ್-147:2007-08 ದಿನಾಂಕ:28-07-2008.

(4)ಪತ್ರ ಸಂಖ್ಯೆ: ಪವಕನಿ/ಇಡಿ(2)/ಸಿಆರ್-87/2007-08, ದಿನಾಂಕ:30-07-2008.

(5)ಪತ್ರ ಸಂಖ್ಯೆ:ಕವಶಿಸ/ಶಿಕ್ಷಣ/ಸಿಆರ್-62/2007-08, ದಿನಾಂಕ:30-07-2008.

----

## ಪ್ರಸ್ತಾವನೆ:

ಮೇಲೆ ಉಲ್ಲೇಖ (1)ರಲ್ಲಿ ನಮೂದಿಸಿರುವ ಆದೇಶದಲ್ಲಿ ಸಮಾಜ ಕಲ್ಯಾಣ ಸಚಿವಾಲಯದ ವ್ಯಾಪ್ತಿಗೆ ಬರುವ ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಹಾಗು ಅಲ್ಪಸಂಖ್ಯಾತರ ಇಲಾಖೆಗಳ ಸರ್ಕಾರಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳ ಭೋಜನಾ ವೆಚ್ಚವನ್ನು ಪ್ರತಿ ವಿದ್ಯಾರ್ಥಿಗೆ ಮಾಹೆಯಾನ ರೂ.400.00 ರಿಂದ ರೂ.480.00ಗಳಿಗೆ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳ ಭೋಜನಾ ವೆಚ್ಚವನ್ನು ಪ್ರತಿ ವಿದ್ಯಾರ್ಥಿಗೆ ಮಾಹೆಯಾನ ರೂ.450.00 ರಿಂದ ರೂ.500.00ಗಳಿಗೆ ಹೆಚ್ಚಿಸಿ ಆದೇಶ ಹೊರಡಿಸಲಾಗಿದೆ.

ಮಾನ್ಯ ಮುಖ್ಯ ಮಂತ್ರಿಗಳು ದಿನಾಂಕ:17ನೇ ಜುಲೈ, 2008ರಂದು ಮಂಡಿಸಿದ 2008-09ನೇ ಸಾಲಿನ ಆಯವ್ಯಯದಲ್ಲಿ ಇತರೆ ಘೋಷಣೆಗಳೊಂದಿಗೆ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗಗಳ ಸಮುದಾಯಕ್ಕೆ ಸೇರಿದ ಮೆಟ್ರಿಕ್ ಪೂರ್ವ ವಸತಿ ನಿಲಯಗಳಲ್ಲಿ ಇರುವ ವಿದ್ಯಾರ್ಥಿಗಳ ಭೋಜನಾ ವೆಚ್ಚವನ್ನು ಮಾಸಿಕ ರೂ.450.00ಗಳಿಂದ ರೂ.600.00ಗಳಿಗೆ ಹಾಗೂ ಮೆಟ್ರಿಕ್ ನಂತರದ ವಸತಿ ನಿಲಯಗಳಲ್ಲಿ ಇರುವ ವಿದ್ಯಾರ್ಥಿಗಳ ಭೋಜನಾ ವೆಚ್ಚವನ್ನು ರೂ.500.00ಗಳಿಂದ ರೂ.650.00ಗಳಿಗೆ ಹೆಚ್ಚಿಸಿ ಘೋಷಿಸಿರುತ್ತಾರೆ.

ಮೇಲ್ಕಂಡ ಘೋಷಣೆಯನ್ನು ಅನುಸರಿಸಿ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ ಸಂಬಂಧಿಸಿದಂತೆ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು, ನಿರ್ದೇಶಕರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು, ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಗಳನ್ನು ಮತ್ತು

ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ ಸಂಬಂಧಿಸಿದಂತೆ ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘರವರುಗಳಿಗೆ ಈ ಬಗ್ಗೆ ಪರಿಶೀಲಿಸಿ ವರದಿ ಕೋರಲಾಗಿ ಅವರುಗಳು ಮೇಲೆ ಉಲ್ಲೇಖ (2),(3),(4) ಮತ್ತು (5)ಗಳಲ್ಲಿ ಭೋಜನಾ ವೆಚ್ಚವನ್ನು ಹೆಚ್ಚಿಸಲು ಕೋರಿರುತ್ತಾರೆ.

ವಿಷಯವನ್ನು ಪರಿಶೀಲಿಸಿದ ಸರ್ಕಾರ ಆಯವ್ಯಯದ ಘೋಷಣೆಯಂತೆ ಭೋಜನಾ ವೆಚ್ಚವನ್ನು ಹೆಚ್ಚಿಸಿ ಆದೇಶ ಹೊರಡಿಸುವುದು ಸೂಕ್ತ ಎಂದೆಣಿಸಿ ಈ ಆದೇಶ ಹೊರಡಿಸಿರುತ್ತದೆ.

**ಆದೇಶ ಸಂಖ್ಯೆ: ಸಕಇ 77 ಸಮನ್ವಯ 2008, ಬೆಂಗಳೂರು, ದಿನಾಂಕ: 12-08-2008**

---

ಸಮಾಜ ಕಲ್ಯಾಣ ಸಚಿವಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಗಳ ಅಡಿಯಲ್ಲಿ ಬರುವ ಸರ್ಕಾರಿ ಮೆಟ್ರಿಕ್-ಪೂರ್ವ ಮತ್ತು ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳಿಗೆ ಆದೇಶ ಸಂಖ್ಯೆ: ಸಕಇ 251 ಪಕವಿ 2005, ದಿನಾಂಕ:01-04-2008ರಲ್ಲಿ ನಿಗಧಿಪಡಿಸಿದ್ದ ಭೋಜನಾ ವೆಚ್ಚವನ್ನು ತಕ್ಷಣದಿಂದ ಜಾರಿಗೆ ಬರುವಂತೆ ಈ ಕೆಳಕಂಡಂತೆ ಹೆಚ್ಚಿಸಿ ಆದೇಶಿಸಲಾಗಿದೆ.

1. ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳ ಪ್ರತಿ ವಿದ್ಯಾರ್ಥಿಯ ಮಾಹೆಯಾನ ಭೋಜನಾ ವೆಚ್ಚವನ್ನು ರೂ.450.00 ರಿಂದ ರೂ.600.00ಗಳಿಗೆ ಹೆಚ್ಚಿಸಲಾಗಿದೆ.

2. ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಪ್ರತಿ ವಿದ್ಯಾರ್ಥಿಯ ಮಾಹೆಯಾನ ಭೋಜನಾ ವೆಚ್ಚವನ್ನು ರೂ.500.00 ರಿಂದ ರೂ.650ಗಳಿಗೆ ಹೆಚ್ಚಿಸಲಾಗಿದೆ.
3. ಅದರಂತೆ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿನ ಪ್ರತಿ ವಿದ್ಯಾರ್ಥಿಯ ಮಾಹೆಯಾನ ಭೋಜನಾ ವೆಚ್ಚವನ್ನು ರೂ.500.00 ರಿಂದ ರೂ.650.00ಗಳಿಗೆ ಹೆಚ್ಚಿಸಲಾಗಿದೆ.

ಸಮಾಜ ಕಲ್ಯಾಣ ಇಲಾಖೆಗೆ ಸಂಬಂಧಿಸಿದಂತೆ ಭೋಜನಾ ವೆಚ್ಚವನ್ನು ಲೆಕ್ಕ ಶೀರ್ಷಿಕೆ 2225-01-277-0-71 (ಯೋಜನೆ), 2225-01-277-0-71 (ಯೋಜನೇತರ) ಮತ್ತು ಹೆಚ್ಚುವರಿ ಭೋಜನಾ ವೆಚ್ಚವನ್ನು 2225-01-277-0-74 (ಯೋಜನೆ) ಮತ್ತು 2225-01-277-0-74 (ಯೋಜನೇತರ) ಅಡಿಯಲ್ಲಿ ಭರಿಸುವುದು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಸಂಬಂಧಿಸಿದಂತೆ ವೆಚ್ಚವನ್ನು ರಾಜ್ಯವಲಯ ಯೋಜನೆಯ ಲೆಕ್ಕಶೀರ್ಷಿಕೆ 2225-03-277-2-71, ಜಿಲ್ಲಾವಲಯ ಯೋಜನೆಯ ಲೆಕ್ಕಶೀರ್ಷಿಕೆ 2225-03-277-2-71 ಮತ್ತು 2225-03-277-2-72 ಮತ್ತು ಜಿಲ್ಲಾವಲಯ ಯೋಜನೇತರ ಲೆಕ್ಕಶೀರ್ಷಿಕೆ 2225-03-277-2-71 ಗಳ ಅಡಿಯಲ್ಲಿ ಭರಿಸುವುದು.

ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಗೆ ಸಂಬಂಧಿಸಿದಂತೆ ವೆಚ್ಚವನ್ನು ಜಿಲ್ಲಾವಲಯ ಯೋಜನೆ ಲೆಕ್ಕ ಶೀರ್ಷಿಕೆ 2225-02-277-0-71 ಮತ್ತು 2225-02-277-0-74ಗಳ ಅಡಿಯಲ್ಲಿ ಭರಿಸುವುದು.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘಕ್ಕೆ ಸಂಬಂಧಿಸಿದಂತೆ ವೆಚ್ಚವನ್ನು ಲೆಕ್ಕ ಶೀರ್ಷಿಕೆ 2225-01-277-077(ಪರಿಶಿಷ್ಟ ಜಾತಿ) ಯೋಜನೆ, 2225-01-277-0-76 (ಪರಿಶಿಷ್ಟ ಜಾತಿ) ಯೋಜನೆ, 2225-02-277-0-76 (ಪರಿಶಿಷ್ಟ ವರ್ಗ) ಯೋಜನೆ, 2225-03-277-2-49 (ಹಿಂದುಳಿದ ವರ್ಗ) ಯೋಜನೆ ಮತ್ತು 2225-01-277-0-80 (ಸಾ.ವರ್ಗ,ಶಿಕ್ಷಣ) ಯೋಜನೇತರ ಅಡಿಯಲ್ಲಿ ಭರಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ: ಆಇ 427 ವೆಚ್ಚ.3 2008, ದಿನಾಂಕ: 08-08-2008ರಲ್ಲಿ ನೀಡಿರುವ ಸಹಮತಿ ಅನುಸರಿಸಿ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಂ.ಎಂ.ಬಾಟೆ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

12/8/08

ಇವರಿಗೆ,

(1) ಮಹಾಲೇಖಪಾಲರು (ಅ ಮತ್ತು ಇ), ಕರ್ನಾಟಕ, ಬೆಂಗಳೂರು.
(2) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
(3) ನಿರ್ದೇಶಕರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
(4) ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
(5) ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು.
(6) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-3), ವಿಧಾನಸೌಧ, ಬೆಂಗಳೂರು.
(7) ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ ಸುಧಾರಣೆ), ಬಹುಮಹಡಿ ಕಟ್ಟಡ, ಬೆಂಗಳೂರು.
(8) ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು.
(9) ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.